# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
## 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–3

ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಪ.ಫ–2/ಪ–3/06/2025–26 ದಿನಾಂಕ:23.07.2025

**:: ಸುತ್ತೋಲೆ ::**

ವಿಷಯ:– 2025ರ ಜುಲೈ ಮಾಹೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆ–3ರ ಫಲಿತಾಂಶ ಪ್ರಕಟಣೆ ಹಾಗೂ ಫಲಿತಾಂಶ ಪಟ್ಟಿ ಪರಿಶೀಲನೆ ಕುರಿತು.

*****

2025ರ ಜುಲೈ ಮಾಹೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆ–3ರ ಫಲಿತಾಂಶ ಪಟ್ಟಿಯನ್ನು ಮಂಡಳಿ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ದಿನಾಂಕ: 23.07.2025ರ ಸಂಜೆ 7.30 ಗಂಟೆಗೆ ಅಪ್‌ಲೋಡ್ ಮಾಡಲಾಗುವುದು. ಪರೀಕ್ಷಾ ಫಲಿತಾಂಶವನ್ನು ಆಯಾ ಶಾಲೆಗಳ ಮುಖ್ಯಶಿಕ್ಷಕರು ಮಂಡಲಿಯ https://kseab.karnataka.gov.in ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ತಮ್ಮ ಶಾಲೆಯಲ್ಲಿ ದಿನಾಂಕ 24.07.2025 ರಂದು ಪೂರ್ವಾಹ್ನ 10.00 ಗಂಟೆಗೆ ಪ್ರಕಟಿಸಲು ಸೂಚಿಸಿದೆ.

- ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ಫಲಿತಾಂಶವನ್ನು **https://karresults.nic.in** ನಲ್ಲಿ ಪಡೆಯಬಹುದಾಗಿದೆ.

- ಪರೀಕ್ಷೆ–3ರಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆದ ವಿಷಯಗಳ ನೈಜ ಅಂಕಗಳು ಮತ್ತು ಪರೀಕ್ಷೆ–1, 2 ಹಾಗೂ 3ರ ತುಲನಾತ್ಮಕ ಅಂಕಗಳನ್ನು ಮಂಡಲಿಯ https://kseab.karnataka.gov.in ಜಾಲತಾಣದಲ್ಲಿ ವೀಕ್ಷಿಸಬಹುದಾಗಿದೆ.

ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನ ಈ ಸೇವೆಗಳನ್ನು ಆನ್‌ಲೈನ್ ಮೂಲಕ ಈಗಾಗಲೇ ನೀಡಲಾಗುತ್ತಿದ್ದು, ಪ್ರಸ್ತುತ ವರ್ಷದಿಂದ ಸದರಿ ಸೇವೆಗಳನ್ನು ರಾಜ್ಯ ಸರ್ಕಾರದ Karnataka One ಮೊಬೈಲ್ ಆಪ್ ಮೂಲಕವೂ ಸಹ ಸೇವೆಯನ್ನು ಒದಗಿಸಲಾಗುತ್ತಿದೆ. ವಿದ್ಯಾರ್ಥಿಗಳು ತಮ್ಮ Android ಮೊಬೈಲ್ Playstore ಮೂಲಕ ಸದರಿ ಆಪ್‌ನ್ನು ಡೌನ್‌ಲೋಡ್ ಮಾಡಿಕೊಂಡು ಸದರಿ ಸೇವೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಗಳು ಸದರಿ ಸೇವೆಯ ಸದುಪಯೋಗ ಪಡಿಸಿಕೊಳ್ಳಲು ಸೂಚಿಸಿದೆ. 2025ರ ಜುಲೈ ಮಾಹೆಯ ಎಸ್.ಎಸ್.ಎಲ್.ಸಿ ಪರೀಕ್ಷೆ–3ರ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು **ಆನ್‌ಲೈನ್** ಮುಖಾಂತರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ವೇಳಾ ಪಟ್ಟಿಯು ಈ ಕೆಳಕಂಡಂತಿದೆ.

| ವಿವರ | ನಿಗದಿಪಡಿಸಿದ ದಿನಾಂಕ |
|---|---|
| ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ | 24.07.2025 ರಿಂದ 28.07.2025 |
| ಡೆಬಿಟ್‌ಕಾರ್ಡ್/ಕ್ರೆಡಿಟ್‌ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಬ್ಯಾಂಕಿಗೆ ಪಾವತಿಸಲು **ಅಂತಿಮ** ದಿನಾಂಕ: | 29.07.2025 |
| ಉತ್ತರ ಪತ್ರಿಕೆಗಳ ಮರುಎಣಿಕೆಗೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ: | 27.07.2025 ರಿಂದ 31.07.2025 |

